78

**ಮಾನ್ಯ ವಿಧಾನ ಪರಿಷತ್ ಸದಸ್ಯರಾದಶ್ರೀ ಎಸ್.ಎಲ್. ಭೋಜೇಗೌಡ (ನೈರುತ್ಯ ಶಿಕ್ಷಕರ ಕ್ಷೇತ್ರ) ಹಾಗೂ ಶ್ರೀ ಕೆ.ವಿವೇಕಾನಂದ (ದಕ್ಷಿಣ ಶಿಕ್ಷಕರ ಕ್ಷೇತ್ರ)ರವರ ನಿಯಮದ 72ರ ಗಮನ ಸೆಳೆಯುವ ಸೂಚನೆ.**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಬರುವ ಸರ್ಕಾರಿ ಮತ್ತು ಅನುದಾನಿತ ಪ್ರೌಢ ಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳ ಮುಂಬಾಗದ ರಸ್ತೆಗಳು ತುಂಬಾ ದುರಸ್ಥಿಯಿಂದ ಕೂಡಿದ್ದು, ಸರ್ಕಾರ ವಿದ್ಯಾರ್ಥಿಗಳ ಉಪಯೋಗಕ್ಕೆ ಅನುಕೂಲವಾಗಲು ಈ ಗ್ರಾಮೀಣ ಭಾಗದಲ್ಲಿ ಬರುವ ಪ್ರೌಢ ಶಾಲೆಗಳ ರಸ್ತೆಗಳನ್ನು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಹಾದು ಹೋಗುವ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೂಡಲೇ ವಿಶೇಷ ಅನುದಾನವನ್ನು ಬಿಡುಗಡೆ ಮಾಡಿ ಈ ಶಾಲಾ ಕಾಲೇಜುಗಳ ಮುಂಭಾಗದ ರಸ್ತೆ ಕಾಮಗಾರಿಯನ್ನು ವಿದ್ಯಾರ್ಥಿಗಳ ಅನುಕೂಲಕ್ಕೋಸ್ಕರ ಅಭಿವೃದ್ಧಿ ಮಾಡಬೇಕೆಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇವೆ.

<u>ನಿಯಮ 72 ರಅಡಿಯಲ್ಲಿಗಮನ ಸೆಳೆಯುವ ಸೂಚನೆಗೆ ಉತ್ತರ.</u>

ಗ್ರಾಮೀಣ ಭಾಗಗಳ ರಸ್ತೆ ಮತ್ತು ಸೇತುವೆಗಳನ್ನು ಈ ಕೆಳಕಂಡ ಕಾರ್ಯಕ್ರಮಗಳಡಿ ಅಭಿವೃದ್ಧಿ ಪಡಿಸಲಾಗುತ್ತಿದೆ.

- 5054 ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮ
- 5054- ಎಸ್‌ಸಿಪಿ ಮತ್ತುಟಿಎಸ್‌ಪಿ ಕಾರ್ಯಕ್ರಮ
- 3054-ಸಿಎಂಜಿಎಸ್‌ವೈ (ಲಿಂಕ್ ಡಾಕ್ಯೂಮೆಂಟ್) ಕಾರ್ಯಕ್ರಮ
- 3054- ರಸ್ತೆಗಳ ನಿರ್ವಹಣೆ (ಟಾಸ್ಕ್ ಫೋರ್ಸ್) ಕಾರ್ಯಕ್ರಮ

2024-25 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ: 5054 ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ, ಎಸ್‌ಸಿಪಿ ಮತ್ತುಟಿಎಸ್‌ಪಿ ಕಾರ್ಯಕ್ರಮ ಮತ್ತು 3054 ಸಿಎಂಜಿಎಸ್‌ವೈ ಯೋಜನೆಯಡಿ ಮತ್ತು ರಸ್ತೆಗಳ ನಿರ್ವಹಣೆ ಕಾರ್ಯಕ್ರಮಗಳಡಿ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಇದಲ್ಲದೆ, ಪ್ರಗತಿಪಥ ಯೋಜನೆಯಡಿ ರಾಜ್ಯದ 7110.00 ಕಿ.ಮೀ. ಉದ್ದದ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಯೋಜಿಸಲಾಗಿದೆ ಹಾಗೂ ಕಲ್ಯಾಣ ಪಥಯೋಜನೆಗೆ ಅನುಮೋದನೆ ನೀಡಲಾಗಿದ್ದು, ಕಲ್ಯಾಣ ಕರ್ನಾಟಕ ಭಾಗದ 1155.00 ಕಿ.ಮೀ. ಉದ್ದದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಕ್ರಮ ವಹಿಸಲಾಗುತ್ತಿದೆ.

ಗ್ರಾಮೀಣ ಭಾಗದಲ್ಲಿ ಬರುವ ಪ್ರೌಢ ಶಾಲೆಗಳ ರಸ್ತೆಗಳನ್ನು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಹಾದು ಹೋಗುವ ರಸ್ತೆಗಳನ್ನು ಆರ್ಥಿಕ ಇಲಾಖೆಯು ಒದಗಿಸುವ ಅನುದಾನದ ಲಭ್ಯತೆಯನ್ನಾಧರಿಸಿ ಅಭಿವೃದ್ಧಿಪಡಿಸಲು ಕ್ರಮ ವಹಿಸಬೇಕಿದೆ

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು